ಸುವರ್ಣ ಕರ್ನಾಟಕ

ಕರ್ನಾಟಕ ಸರ್ಕಾರ

# ಗ್ರಾಮ ಪಂಚಾಯಿತಿ ಕಾರ್ಯಾಲಯ, ಭೈರದೇವನಹಳ್ಳಿ

ಬಳ್ಳಾರಿ ತಾ।। ಬಳ್ಳಾರಿ ಜಿ।।

ಉಲ್ಲೇಖ ಸಂ

ದಿನಾಂಕ:...೧೨/೦೫/೨೦೨೦....

ಗೆ,

ಶ್ರೀ ಬಿ ಎಸ್ ಯಡಿಯೂರಪ್ಪ ಮಾನ್ಯ ಮುಖ್ಯ ಮಂತ್ರಿಗಳು ಕರ್ನಾಟಕ ಸರ್ಕಾರ ವಿಧಾನ ಸೌಧ
ಬೆಂಗಳೂರು.

ವಿಷಯ : ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ.

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-೧೯ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಯಾಗಿವೆ. ಇದರ ಪರಿಣಾಮ, ಕರ್ನಾಟಕದಲ್ಲಿ, ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-೧೯ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದರಿಂದ ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರೆ ಯಾವುದೇ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ. ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸರ್ಕಾರದತಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಾಮುಖವಾದುದ್ರು ಗ್ರಾಮ ಪಂಚಾಯತ್ ಒಂದು ಸ್ಥಳಿಯ ಸ್ವಯಂ ಸರ್ಕಾರ ಹೀಗಾಗಿಯೇ ಇಡೀ ರಾಜ್ಯದಾದ್ಯಂತ ಕೋವಿಡ್-೧೯ರ ಪರಿಸ್ಥಿತಿ ಘೋಷಣೆಯ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಕೆಗಳ ಸ್ವಯಂ ಸೇವಾ ಸಂಸ್ಥೆಗಳ, ಸ್ವಯಂ ಸೇವಕರ ಸಂಯೋಜನೆಯಲ್ಲಿ ಚಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್ ನ ವಿಕೋಪ ನಿರ್ವಾಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು ಚುನಾಯಿತ ಪ್ರತಿನಿಧಿಗಳಾದ ಗ್ರಾಮ ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ ಜವಾಬ್ದಾರಿಗಳ ಮಹತ್ವವನ್ನು ಅಳವಾಗಿ ಅರ್ಥಮಾಡಿಕೊಂಡಿರುವುದರಿಂದ ವಿಕೋಪದ ಪರಿಸ್ಥಿತಿಯನ್ನು ಸಹ ನಿಭಾಯಿಸಲು ಸ್ಥಳಿಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುವುದನ್ನು

ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುವುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ. ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸಿರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಾಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥತಿ ಇನ್ನೂ ಮುಂದುವರಿಯುತ್ತಿರುವ ಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದುದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈಬಿಡ್ಡು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್ ನ ಸಾಮಾನ್ಯ ಸಭೆಯ ನಿರ್ಣಯವನ್ನು, ಮಂಡಿಸುತ್ತಿದ್ದೇವೆ. ಇದೇ ಪಂಚಾಯತ್ ನ ಜನರಿಂದ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ನೀಲಮ್ಮ
ಅಧ್ಯಕ್ಷರು
ಅಧ್ಯಕ್ಷರು
ಗ್ರಾಮ ಪಂಚಾಯಿತಿ, ಭೈರದೇವನಹಳ್ಳಿ
ಬಳ್ಳಾರಿ ತಾ ಬಳ್ಳಾರಿ ಜಿಲ್ಲೆ

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು ಭೈರದೇವನಹಳ್ಳಿ ಗ್ರಾಮ ಪಂಚಾಯತ್, ಬಳ್ಳಾರಿ ತಾಲ್ಲೂಕು ಬಳ್ಳಾರಿ ಜಿಲ್ಲಾ

ಸ್ಥಳ : ಭೈರದೇವನಹಳ್ಳಿ
ದಿನಾಂಕ: 11.05.2020

ನೀಲಮ್ಮ
ಉಪಾಧ್ಯಕ್ಷರು
ಗ್ರಾಮ ಪಂಚಾಯಿತಿ, ಭೈರದೇವನಹಳ್ಳಿ
ಬಳ್ಳಾರಿ ತಾ ಬಳ್ಳಾರಿ ಜಿ

<u>ಯಥಾ ಪ್ರತಿ:</u>

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ, ಕರ್ನಾಟಕ

ಭೈರದೇವನ ಹಳ್ಳಿ ------ ಗ್ರಾಮ ಪಂಚಾಯತ್ ---ಬಳ್ಳಾರಿ--- ತಾಲ್ಲೂಕು ---ಬಳ್ಳಾರಿ--- ಜಿಲ್ಲೆ

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 1 | ಬಿ. ವೆಂಕ್ಟಮ್ಮ | | ಬಿ ವೆಂಕ್ಟಮ್ಮ |
| 2 | ಬಿ. ರಾಂಜಿಂತ | | ಹಂಪಿಮ್ಮ |
| 3 | ಈರಮ್ಮ | | ಈರಮ್ಮ |
| 4 | | | |
| 5 | | | |
| 6 | | | |
| 7 | | | |
| 8 | | | |
| 9 | | | |
| 10 | | | |
| 11 | | | |
| 12 | | | |
| 13 | | | |
| 14 | | | |
| 15 | | | |
| 16 | | | |
| 17 | | | |
| 18 | | | |
| 19 | | | |

ನೀಲಮ್ಮ

ಅಧ್ಯಕ್ಷರು.
ಗ್ರಾಮ ಪಂಚಾಯಿತಿ, ಭೈರದೇವನಹಳ್ಳಿ
ಭೈರದೇವನಹಳ್ಳಿ
ಬಳ್ಳಾರಿ ತಾ ಬಳ್ಳಾರಿ ಜಿಲ್ಲೆ

ನಿಂಗಲಕ್ಷ್ಮಮ್ಮ

ಉಪಾಧ್ಯಕ್ಷರು
ಗ್ರಾಮ ಪಂಚಾಯಿತಿ, ಭೈರದೇವನಹಳ್ಳಿ
ಬಳ್ಳಾರಿ ತಾ ಬಳ್ಳಾರಿ ಜಿ